ಕರ್ನಾಟಕ ಸರ್ಕಾರ
ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ,-590001
OFFICE OF THE DEPUTY COMMISSIONER, BELAGAVI DISTRICT, BELAGAVI -590001
ದೂರವಾಣಿ : 0831-2407200, 2407273 Email: deo.belagavi@gmail.com

ಸಂ:ಸಿಎಎಲ್/ವಿವ-21/2025-26 ದಿನಾಂಕ:19.08.2025

ವಿಷಯ: ಬೆಳಗಾವಿ ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಬೆಳಗಾವಿ ಜಿಲ್ಲೆಯ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಶಾಲೆಗಳು, ಪದವಿ ಪೂರ್ವ ಕಾಲೇಜುಗಳು ಮತ್ತು ಅಂಗನವಾಡಿಗಳಿಗೆ ರಜೆ ಘೋಷಿಸುವ ಕುರಿತು.

ಉಲ್ಲೇಖ1. ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ (ದ), ಇವರ ಪತ್ರ ಸಂ: ಆಶಾ/ತೀ ಮಳೆ/ಪ್ರಾ, ಪ್ರೌ/ರಜೆ/2025-26 ದಿನಾಂಕ: 19.08.2025.
2.ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಚಿಕ್ಕೋಡಿ ಇವರ ಪತ್ರ ದಿ:19.08.2025
3. ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಇವರ ಪತ್ರ ದಿನಾಂಕ:19.08.2025.
4. ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಇವರ ಪತ್ರ ದಿ:19.08.2025
5.ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 (ಎಮ್) .

*****

**ಪ್ರಸ್ತಾವನೆ:**

ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ (ದ) ಮತ್ತು ಚಿಕ್ಕೋಡಿ ರವರು ಉಲ್ಲೇಖ (1&2) ರಡಿ ಹಾಗೂ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಮತ್ತು ಚಿಕ್ಕೋಡಿ ರವರು ಉಲ್ಲೇಖ (3&4) ರಡಿ ಬೆಳಗಾವಿ ಜಿಲ್ಲೆಯಲ್ಲಿ ವಿಪರೀತ ಮಳೆ ಸುರಿಯುತ್ತಿರುವ ಹಿನ್ನಲೆಯಲ್ಲಿ ಬೆಳಗಾವಿ ಜಿಲ್ಲೆಯಾದ್ಯಂತ ಮಕ್ಕಳ ಸುರಕ್ಷತಾ ದೃಷ್ಟಿಯಿಂದ ದಿನಾಂಕ:20.08.2025 ರಂದು ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರಾಥಮಿಕ, ಪ್ರೌಢ ಶಾಲೆಗಳಿಗೆ ಮತ್ತು ಜಿಲೆಯ ಎಲ್ಲ ಪದವಿ ಪೂರ್ವ ಕಾಲೇಜುಗಳಿಗೆ ರಜೆ ನೀಡುವಂತೆ ಕ್ರಮವಾಗಿ ಕೋರಿರುತ್ತಾರೆ.

ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ (ದ) ಮತ್ತು ಚಿಕ್ಕೋಡಿ ಹಾಗೂ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಮತ್ತು ಚಿಕ್ಕೋಡಿ ರವರು ವರದಿಗಳನ್ನಾಧರಿಸಿ ಶಾಲಾ ಮಕ್ಕಳ ಸುರಕ್ಷತೆಯ ಹಿತದೃಷ್ಟಿಯಿಂದ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34(ಎಮ್) ರಡಿ ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರಿಗೆ ಪ್ರದತ್ತವಾದ ಅಧಿಕಾರದ ಮೇರೆಗೆ ಬೆಳಗಾವಿ ಜಿಲ್ಲೆಯಾದ್ಯಂತ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರಾಥಮಿಕ, ಪ್ರೌಢ ಶಾಲೆಗಳು, ಅಂಗನವಾಡಿಗಳು ಮತ್ತು ಜಿಲೆಯ ಎಲ್ಲ ಪದವಿ ಪೂರ್ವ ಕಾಲೇಜುಗಳಿಗೆ ದಿನಾಂಕ: 20-08-2025 ರಂದು ರಜೆ ಘೋಷಿಸುವ ಅವಶ್ಯಕತೆ ಇರುವುದರಿಂದ ಈ ಕೆಳಗಿನಂತೆ ಆದೇಶ ಮಾಡಿದೆ.

**ಆದೇಶ**

ಈ ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ ಮತ್ತು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 (ಎಮ್) ರಡಿ ಪ್ರದತ್ತವಾದ ಅಧಿಕಾರದ ಮೇರೆಗೆ **ಬೆಳಗಾವಿ ಜಿಲ್ಲೆಯಲ್ಲಿರುವ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರಾಥಮಿಕ, ಪ್ರೌಢ ಶಾಲೆ, ಅಂಗನವಾಡಿಗಳು ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ದಿನಾಂಕ: 20-08-2025 ರಂದು ರಜೆ ಘೋಷಿಸಿ ಆದೇಶಿಸಿದೆ.**

ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಳಗಾವಿ ಮತ್ತು ಚಿಕ್ಕೋಡಿ, ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಮತ್ತು ಚಿಕ್ಕೋಡಿ ಹಾಗೂ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಬೆಳಗಾವಿ ರವರು ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಹಾಗೂ ಈ ರಜಾ ಅವಧಿಯನ್ನು ಮುಂದಿನ ದಿನಗಳಲ್ಲಿ ಹೊಂದಾಣಿಕೆ ಮಾಡಿಕೊಳ್ಳುವುದು.

Digitally signed by
MOHAMMAD ROSHAN
Date: 19-08-2025
17:21:27

**ಜಿಲ್ಲಾಧಿಕಾರಿ ಹಾಗೂ ಅದ್ಯಕ್ಷರು**
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,**
**ಬೆಳಗಾವಿ ಜಿಲ್ಲೆ, ಬೆಳಗಾವಿ**

**ಪ್ರತಿ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ :**

1. ಪೋಲಿಸ್ ಆಯುಕ್ತರು, ಬೆಳಗಾವಿ ನಗರ, ಬೆಳಗಾವಿ.
2. ಪೋಲಿಸ್ ಅಧೀಕ್ಷಕರು, ಬೆಳಗಾವಿ
3. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ, ಬೆಳಗಾವಿ
4. ಉಪವಿಬಾಗಾಧಿಕಾರಿಗಳು, ಬೆಳಗಾವಿ, ಬೈಲಹೊಂಗಲ, ಚಿಕ್ಕೋಡಿ.
5. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಳಗಾವಿ, ಚಿಕ್ಕೋಡಿ.
6. ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ, ಚಿಕ್ಕೋಡಿ.
7. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಳಗಾವಿ
8. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೆಳಗಾವಿ ರವರಿಗೆ ಸರ್ಕಾರಕ್ಕೆ ವೆಚ್ಚ ಬಾರದ ರೀತಿಯಲ್ಲಿ ಸ್ಥಳೀಯ ಸುದ್ದಿ ಮಾದ್ಯಮಗಳಲ್ಲಿ ಪ್ರಕಟಿಸುವ ಕುರಿತು.
9. ಜಿಲ್ಲೆಯ ಎಲ್ಲ ತಹಶೀಲ್ದಾರರು

Digitally signed by
HONAKERI VIJAYAKUMAR
Date: 19-08-2025
17:09:39

**ಅಪರ ಜಿಲ್ಲಾಧಿಕಾರಿ,**
**ಬೆಳಗಾವಿ ಜಿಲ್ಲೆ, ಬೆಳಗಾವಿ**